**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 266 |
| ಸದಸ್ಯರ ಹೆಸರು | : | ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 06.03.2025 |
| ಉತ್ತರಿಸುವ ಸಚಿವರು | : | ಮಾನ್ಯ ಗೃಹ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯಾದ್ಯಂತ ಹಾಗೂ ವಿಶೇಷವಾಗಿ ಬೆಂಗಳೂರು ನಗರದಲ್ಲಿ ಹಲವು ಕಿಡಿಗೇಡಿಗಳು ಮತ್ತು ದರೋಡೆಕೋರರಿಂದ ಕಾನೂನು ಸುವ್ಯವಸ್ಥೆ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ರಾಜ್ಯಾದ್ಯಂತ ಕಾನೂನು ಸುವ್ಯವಸ್ಥೆ ಹಾಳು ಮಾಡುವಂತಹ ಘಟನೆಗಳು ನಡೆಯದಂತೆ ಮುಂಗಡ ಮಾಹಿತಿಯನ್ನು ಕಲೆಹಾಕಿ ಅಹಿತಕರ ಘಟನೆಗಳು ನಡೆಯದಂತೆ ಸೂಕ್ತ ನಿಗಾವಹಿಸಲಾಗುತ್ತಿದೆ. |
| ಆ) | ಬಂದಿದ್ದಲ್ಲಿ, ವೀಲ್ಹಿಂಗ್ ಹಾಗೂ ಎಷ್ಟೋ ಕಿಡಿಗೇಡಿಗಳು, ದರೋಡೆಕೋರರ ಕೈನಲ್ಲಿ ಚಾಕು, ಚೂರಿ, ಲಾಂಗ್‌ಗಳನ್ನು ಹಿಡಿದುಕೊಂಡು ಓಡಾಡುತ್ತಿದ್ದರೂ ಪೊಲೀಸರು ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣವೇನು? ಸಂಬಂಧಪಟ್ಟ ಪೊಲೀಸ್ ಅಧಿಕಾರಿಗಳ ಕರ್ತವ್ಯ ಲೋಪವನ್ನು ಗಮನಿಸಲಾಗಿದೆಯೇ; | ವೀಲ್ಹಿಂಗ್ ಮಾಡುವಂತಹ ಮತ್ತು ಕೈಯಲ್ಲಿ ಚಾಕು, ಚೂರಿ, ಲಾಂಗ್‌ಗಳನ್ನು ಹಿಡಿದುಕೊಂಡು ಓಡಾಡುತ್ತಾ ಸಮಾಜದಲ್ಲಿ ಶಾಂತಿ ಕದಡುತ್ತಿರುವುದು ಕಂಡು ಬಂದ ಕೂಡಲೇ ಅಂತಹವರನ್ನು ದಸ್ತಗಿರಿ ಮಾಡಿ ಬಂಧಿಸಿ, ಪ್ರಕರಣಗಳನ್ನು ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ. |
| ಇ) | ಕಾನೂನು ಸುವ್ಯವಸ್ಥೆಯನ್ನು ಸರಿಪಡಿಸುವ ನಿಟ್ಟಿನಲ್ಲಿ ಸರ್ಕಾರ ಯಾವ ರೀತಿ ಕಠಿಣ ಕ್ರಮಗಳನ್ನು ತೆಗೆದುಕೊಳ್ಳಲಿದೆ? | ಸಮಾಜದ ಶಾಂತಿ ಹಾಳು ಮಾಡುವ ಉದ್ದೇಶದಿಂದ ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು ಸುದ್ದಿ ಹಬ್ಬಿಸಿ, ಗಲಭೆ ಸೃಷ್ಟಿಸುವವರ ವಿರುದ್ಧ ಸ್ವಯಂ ಪ್ರೇರಿತವಾಗಿ ಪ್ರಕರಣಗಳನ್ನು ದಾಖಲಿಸಿಕೊಂಡು ಸಾರ್ವಜನಿಕರ ನೆಮ್ಮದಿಯನ್ನು ಕಾಪಾಡಲಾಗುತ್ತಿದೆ.<br>➢ ರಾಜ್ಯದ ಪೊಲೀಸ್ ಠಾಣೆಗಳಲ್ಲಿ ಬೀಟ್ ವ್ಯವಸ್ಥೆ ಮಾಡಲಾಗಿದೆ ಹಾಗೂ ಸದರಿ ಬೀಟ್‌ಗಳಿಗೆ ಉಸ್ತುವಾರಿ ಅಧಿಕಾರಿಗಳನ್ನು ನೇಮಕ ಮಾಡಿ, ಯಾವುದೇ ಅಪರಾಧ ಕೃತ್ಯಗಳು ಜರುಗದಂತೆ ನಿಗಾವಹಿಸಲಾಗುತ್ತಿದೆ. ಒಂದು ವೇಳೆ ಪೊಲೀಸ್ ಅಧಿಕಾರಿ/ಸಿಬ್ಬಂದಿಗಳ ಕರ್ತವ್ಯ ನಿರ್ಲಕ್ಷತೆಯಿಂದಾಗಿ ಅಪರಾಧ ಕೃತ್ಯಗಳು ಜರುಗಲು ಕಾರಣವಾಗಿದ್ದಲ್ಲಿ ಸಂಬಂಧಪಟ್ಟ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ಶಿಸ್ತು ಕ್ರಮವನ್ನು ಜರುಗಿಸಲಾಗುತ್ತಿದೆ.<br>➢ ಕರ್ನಾಟಕ ಸರ್ಕಾರದ ಅಧಿಸೂಚನೆ ಸಂಖ್ಯೆ:ಹೆಚ್‌ಡಿ 267 ಎಸ್‌ಎಸ್‌ಟಿ 2018 ದಿನಾಂಕ: 28.09.2018 ರಲ್ಲಿ ನೀಡಿರುವ ಪ್ರದತ್ತವಾದ ಅಧಿಕಾರದನ್ವಯ ಮತ್ತು ಪದೇ ಪದೇ ಅಪರಾಧ ಕೃತ್ಯಗಳಲ್ಲಿ ತೊಡಗಿರುವ ರೌಡಿ ಆಸಾಮಿಗಳ ಬಗ್ಗೆ ನಿಗಾವಹಿಸಿ ಅವರುಗಳ ವಿರುದ್ಧ ಸುಮೋಟೊ ಪ್ರಕರಣಗಳನ್ನು ದಾಖಲಿಸಿ ಗಡಿಪಾರು ಮಾಡುವಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ ಹಾಗೂ ಸದರಿ ಅಸಾಮಿಗಳ ವಿರುದ್ಧ The |

Karnataka Control of Organised Crime Act-2000 ಮತ್ತು The Karnataka Prevention of Dangerous Activities of Bootleggers, Drug-Offenders, Gamblers, Goondas, Immoral Traffic Offenders, Slum-Grabbers and video or Audio Pirates Act-1985 ರಡಿಯಲ್ಲಿ ಕ್ರಮ ಕೈಗೊಳ್ಳಕಾಗುತ್ತಿದೆ.

- ಸುಸಜ್ಜಿತವಾದ ಗಸ್ತು ಕರ್ತವ್ಯವನ್ನು ನಿರ್ವಹಿಸಲು ನಗರದಲ್ಲಿ ಹೊಯ್ಸಳ ವಾಹನವನ್ನು ಮತ್ತು ಚೀತಾ ವಾಹನಗಳನ್ನು ನಿಯೋಜಿಸಲಾಗಿದೆ. ಈ ಮೂಲಕ ನಗರದ ಯಾವುದೇ ಸ್ಥಳದಿಂದ 112 ಸಂಖ್ಯೆಗೆ ಕರೆಮಾಡಿ ಕೆಲವೇ ನಿಮಿಷಗಳ ಒಳಗಾಗಿ ಆ ಸ್ಥಳವನ್ನು ತಲುಪಿ ನೊಂದ ವ್ಯಕ್ತಿಗೆ ನ್ಯಾಯ ಕೊಡಿಸುವ ಹಾಗೂ ಅಪರಾಧ ಕೃತ್ಯವನ್ನು ತಡೆಯುವ ಯೋಜನೆಯನ್ನು ರೂಪಿಸಲಾಗಿದೆ.
- ಸಾರ್ವಜನಿಕರಿಗೆ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಕರಪತ್ರಗಳನ್ನು ಹಂಚಿಕೆ ಮಾಡಿ ಅವರಿಗೆ ಅಪರಾಧ ಕೃತ್ಯಗಳ ಅರಿವು ಮೂಡಿಸಿ ಹಾಗೂ ಅಲ್ಲಿನ ಭಾತ್ಮೀದಾರರ ಮೂಲಕ ಅಪರಾಧ ಕೃತ್ಯಗಳ ಬಗ್ಗೆ ಆರೋಪಿಗಳ ಬಗ್ಗೆ ಮಾಹಿತಿ ಸಂಗ್ರಹಿಸಿ, ಶಾಂತಿ ಸುವ್ಯವಸ್ಥೆಯನ್ನು ಕಾಪಾಡಲು ಕ್ರಮ ವಹಿಸಲಾಗುತ್ತಿದೆ.
- ಪೊಲೀಸ್ ಠಾಣಾ ಸರಹದ್ದುಗಳಲ್ಲಿ ನಾಗರೀಕ ಸಮಿತಿ ಸದಸ್ಯರ, ಶಾಂತಿ ಪಾಲನಾ ಸಮಿತಿ ಸದಸ್ಯರ ಹಾಗೂ ಹಿರಿಯ ನಾಗರೀಕರ ಜನಸ್ನೇಹಿ ಸಭೆಗಳನ್ನು ಏರ್ಪಡಿಸಲಾಗುತ್ತಿದೆ ಮತ್ತು ಆ ಸಭೆಗಳಲ್ಲಿ ಸಾರ್ವಜನಿಕರಿಂದ ಪೊಲೀಸರಿಗೆ ಯಾವ ರೀತಿ ಮಾಹಿತಿಯನ್ನು ಒದಗಿಸಬಹುದು ಎಂಬ ಬಗ್ಗೆ ಹಾಗೂ ಮಹಿಳೆಯರಿಗೆ ಮತ್ತು ಹೆಣ್ಣು ಮಕ್ಕಳಿಗೆ ಪೊಲೀಸರು ಯಾವ ರೀತಿಯ ರಕ್ಷಣೆಯನ್ನು ನೀಡಲಾಗುವುದು ಎಂಬ ಬಗ್ಗೆ ಸುದೀರ್ಘವಾಗಿ ಚರ್ಚಿಸಲಾಗುತ್ತಿದೆ. ಇದರಿಂದಾಗಿ ಮಹಿಳೆಯರಿಗೆ ಮತ್ತು ಹೆಣ್ಣು ಮಕ್ಕಳಿಗೆ ರಕ್ಷಣೆಯನ್ನು ನೀಡಲು ನೆರವಾಗುತ್ತಿದೆ.
- ಮಹಿಳೆಯರಿಗೆ ಠಾಣೆಯ ಮತ್ತು ಅಧಿಕಾರಿಗಳ ದೂರವಾಣಿ ಸಂಖ್ಯೆಗಳನ್ನು ನೀಡಿ, ಯಾರಾದರೂ ಅನುಮಾನಾಸ್ಪದ/ ಅಪರಿಚಿತ ವ್ಯಕ್ತಿಗಳು ತಮ್ಮ ಮನೆಯ ಬಳಿ ಕಂಡು ಬಂದಲ್ಲಿ ಠಾಣೆಗೆ ದೂರವಾಣಿ ಕರೆ ಮಾಡಿ ಮಾಹಿತಿ ನೀಡುವಂತೆ ತಿಳುವಳಿಕೆ ನೀಡಲಾಗಿರುತ್ತದೆ.
- ಠಾಣಾ ವ್ಯಾಪ್ತಿಯಲ್ಲಿ ಸಾರ್ವಜನಿಕರನ್ನೊಳಗೊಂಡ ವಾಟ್ಸಪ್ ಗ್ರೂಪ್ ಅನ್ನು ತೆರೆದು ಮಾನಿಟರ್ ಮಾಡಲಾಗುತ್ತಿದೆ.
- ಸೋಷಿಯಲ್ ಮೀಡಿಯಾ ಮಾನಿಟರಿಂಗ್ ಸೆಲ್ ರಚಿಸಿ ಮಾನಿಟರಿಂಗ್ ಮಾಡಲಾಗುತ್ತಿದೆ.
- ಕೇಂದ್ರ ಕಾರಾಗೃಹದಿಂದ ಬಿಡುಗಡೆಯಾಗುವ ಅಪರಾಧಿಗಳ ಮಾಹಿತಿಯನ್ನು ಪಡೆದು ಅವರ ಚಲನ-ವಲನದ ಮೇಲೆ ನಿಗಾ ಇಡಲಾಗುತ್ತಿದೆ.
- MCCTNS App ಮೂಲಕ ಫಿಂಗರ್ ಪ್ರಿಂಟ್ ಸ್ಕ್ಯಾನ್ ಮಾಡಿ, ಈ ಹಿಂದೆ ಪ್ರಕರಣ ದಾಖಲಾಗಿದ್ದಲ್ಲಿ ವಿಚಾರಣೆ ಮಾಡಲಾಗುತ್ತಿದೆ.

ಸಂಖ್ಯೆ: 93 ಎಸ್‌ಎಸ್‌ಟಿ 2025

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು